ಇ) ಇದನ್ನು ಯಾವಾಗ ಪ್ರಾರಂಭಿಸಲಾಗುವುದು?

ಡಾ॥ ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸರ್ಕಾರಿ ಆದೇಶ ಸಂಖ್ಯೆ : ಆಕುಕ 194 ಆಯೋಸಂ 94, ದಿನಾಂಕ 12.10.94ರಲ್ಲಿ ಸಮುದಾಯ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲಾಗಿದೆ. ಆದಾಗ್ಯೂ ಸರ್ಕಾರವು ಈ ವಿಷಯವನ್ನು ಪುನರ್ ಪರಿಶೀಲಿಸಿ ಸರ್ಕಾರಿ ಆದೇಶ ಸಂಖ್ಯೆ ಆಕುಕ 194 ಆಯೋಸಂ 94, ದಿನಾಂಕ 20.3.96ರಲ್ಲಿ ಬೈಂದೂರಿಗೆ ಮಂಜೂರು ಮಾಡಲಾಗಿದ್ದ ಸಮುದಾಯ ಆರೋಗ್ಯ ಕೇಂದ್ರವನ್ನು ರದ್ದುಪಡಿಸಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ವೃತ್ತಿ ಶಿಕ್ಷಣದ ಸಾಮಾನ್ಯ ಪರೀಕ್ಷೆ

974 - ಶ್ರೀ ಹಂಪನಗೌಡ ಬಾದಲಿತ (ಸಿಂಧನೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ವೃತ್ತಿ ಶಿಕ್ಷಣದ ಸಾಮಾನ್ಯ ಪರೀಕ್ಷೆಯನ್ನು ವಿಭಾಗೀಯ ಮಟ್ಟದಲ್ಲಿ ನಡೆಸುವ ಉದ್ದೇಶ ಸರ್ಕಾರಕ್ಕಿದೆಯೇ?
2. ಕರ್ನಾಟಕದಲ್ಲಿರುವ ಖಾಸಿಗೆ ಮಹಾವಿದ್ಯಾಲಯಗಳ ಸಂಖ್ಯೆ ಎಷ್ಟು?
   ಈ ಮಹಾವಿದ್ಯಾಲಯಗಳಿಗೆ ಅನುದಾನ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?
3. ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿರುವ ಸರ್ಕಾರಿ ಮಹಾವಿದ್ಯಾಲಯದಲ್ಲಿ ವಿಜ್ಞಾನ ವಿಷಯವನ್ನು ಪ್ರಾರಂಭ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೆ?

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

1. ಇಲ್ಲ.
2. 484.
   ಇಲ್ಲ.
4. ಸಧ್ಯಕ್ಕಿಲ್ಲ.

ಸಿಂಧನೂರು ತಾಲ್ಲೂಕಿನಲ್ಲಿರುವ ಪ್ರಾಥಮಿಕ ಶಾಲಾ ಕಟ್ಟಡಗಳು

975 - ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧನೂರು ತಾಲ್ಲೂಕಿನಲ್ಲಿರುವ 1994-95, 1995-96, 1996-97ನೇ ಸಾಲುಗಳಲ್ಲಿ